ದೂರವಾಣಿ ಸಂಖ್ಯೆ : 0821-2516844

# ಮೈಸೂರು ವಿಶ್ವವಿದ್ಯಾನಿಲಯ
## ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ
ಗ್ರಂಥಾಲಯ ಕಟ್ಟಡ, ಮಾನಸಗಂಗೋತ್ರಿ, ಮೈಸೂರು-570 006

ಸಂಖ್ಯೆ : ವಿವಿಉಮಾಮಾಕೇ/112/2023-24 ದಿನಾಂಕ : 29-02-2024

ಗೆ,

ಎಲ್ಲಾ ಅಧ್ಯಕ್ಷರುಗಳು/ನಿರ್ದೇಶಕರುಗಳಿಗೆ
ಮೈಸೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ವಿಭಾಗ
ಮಾನಸಗಂಗೋತ್ರಿ, ಮೈಸೂರು.

ಮಾನ್ಯರೆ,

ವಿಷಯ : 2022-23ನೇ ಸಾಲಿನಲ್ಲಿ ಉತ್ತೀರ್ಣರಾಗಿರುವ ಬಿ.ಎಡ್ ಸ್ನಾತಕೋತ್ತರ ಪದವಿ/ಎಂ.ಫಿಲ್/ಪಿ.ಹೆಚ್.ಡಿ ವಿದ್ಯಾರ್ಥಿಗಳು ಯುವನಿಧಿ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಬೆಂಗಳೂರು ರವರ ಪತ್ರ ಸಂಖ್ಯೆ:ಕೈತಉ/ಉದ್ಯೋಗ/ಯೋಜನೆ/ಉ-9/ವಿವ-14/2023-24. ದಿನಾಂಕ:22.12.2023 ಮತ್ತು ದಿನಾಂಕ:02.01.2023.

2. ಮಾನ್ಯ ಸರ್ಕಾರದ ಉಪಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯವರ ವರ್ಚುವಲ್ ಸಭೆ. ದಿನಾಂಕ:17.02.2023.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರವು 05 ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯನ್ನು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಮುಖಾಂತರ ರಾಜ್ಯದ ಅರ್ಹ ವಿದ್ಯಾರ್ಥಿಗಳಿಗೆ ನಿರುದ್ಯೋಗ ಭತ್ಯೆಯನ್ನು ಒದಗಿಸುವ ನಿಟ್ಟಿನಲ್ಲಿ ಅನುಷ್ಠಾನಗೊಳಿಸಲಾಗಿದೆ. ಉಲ್ಲೇಖ(2)ರಲ್ಲಿ ಮಾನ್ಯ ಸರ್ಕಾರದ ಅಪರ ಕಾರ್ಯದರ್ಶಿರವರು ಜಿಲ್ಲೆಯಲ್ಲಿ ಪದವಿ ವಿದ್ಯಾರ್ಥಿಗಳೊಂದಿಗೆ, 2022-23ನೇ ಸಾಲಿನಲ್ಲಿ ಬಿ.ಎಡ್, ಸ್ನಾತಕೋತ್ತರ ಪದವಿ/ಎಂ.ಫಿಲ್/ಪಿ.ಹೆಚ್.ಡಿ, ಹೀಗೆ ಯಾವುದೇ ಪದವಿ/ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ವಿದ್ಯಾರ್ಥಿಗಳನ್ನು ಯುವನಿಧಿ ಯೋಜನೆಯಡಿ ನೋಂದಾಯಿಸಲು ಕ್ರಮವಹಿಸುವಂತೆ ಸೂಚಿಸಿರುತ್ತಾರೆ.

ಆದ್ದರಿಂದ ತಮ್ಮ ವಿಭಾಗದಲ್ಲಿ 2022-2023ನೇ ಸಾಲಿನಲ್ಲಿ ಬಿ.ಎಡ್/ಎಂ.ಎಡ್/ಸ್ನಾತಕೋತ್ತರ ಪದವಿ/ಎಂ.ಫಿಲ್/ಪಿ.ಹೆಚ್.ಡಿ, ಪೂರ್ಣಗೊಳಿಸಿರುವ ವಿದ್ಯಾರ್ಥಿಗಳು ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ http://sevasindhugs.karnataka.gov.in ಪೋರ್ಟಲ್‌ನಲ್ಲಿ ನೋಂದಾಯಿಸಲು ಕ್ರಮವಹಿಸಬೇಕಾಗಿ ಕೋರಿದೆ. ಹೆಚ್ಚಿನ ಮಾಹಿತಿಗಾಗಿ ನಮ್ಮ ಕಛೇರಿಯ ಯುವನಿಧಿ ಸಹಾಯವಾಣಿಯನ್ನು ಸಂಪರ್ಕಿಸಬೇಕೆಂದು ಹಾಗೂ ಈ ಪತ್ರವನ್ನು ಸೂಚನಾ ಫಲಕದಲ್ಲಿ ಪ್ರಕಟಿಸಬೇಕಾಗಿ ಕೋರಿದೆ.

ತಮ್ಮ ವಿಶ್ವಾಸಿ

ಉಪ ಮುಖ್ಯಸ್ಥರು
ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಮಾನಸಗಂಗೋತ್ರಿ
ಮೈಸೂರು-570 006

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ಕೋ-ಆರ್ಡಿನೇಟರ್, ಐಸಿಡಿ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ ಈ ಪತ್ರವನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.